# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಮಾನ್ಯ ಸದಸ್ಯರ ಹೆಸರು | : | ಶ್ರೀ ಬಿ.ಜಿ.ಪಾಟೀಲ್ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | **873** |
| ಉತ್ತರಿಸಬೇಕಾದ ದಿನಾಂಕ | : | 13.12.2023 |
| ಉತ್ತರಿಸಬೇಕಾದ ಸಚಿವರು | : | ವಸತಿ,ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ವಸತಿ ಇಲಾಖೆಯಿಂದ ಪ್ರಸಕ್ತ ವರ್ಷ ಎಷ್ಟು ಫಲಾನುಭವಿಗಳಿಗೆ ಮನೆಗಳನ್ನು ಮಂಜೂರಾತಿ ಮಾಡಲಾಗಿದೆ; (ಸಂಪೂರ್ಣ ವಿವರ ನೀಡುವುದು) | ಪ್ರಸಕ್ತ ವರ್ಷ ಯಾವುದೇ ಹೊಸ ಮನೆಗಳ ಗುರಿಯನ್ನು ಮಂಜೂರು ಮಾಡಿರುವುದಿಲ್ಲ.<br><br>ಕಳೆದ ಮೂರು ವರ್ಷಗಳಲ್ಲಿ ಅಂದರೆ 2020-21 ನೇ ಸಾಲಿನಿಂದ 2022-23 ನೇ ಸಾಲಿನವರೆಗೆ ವಿವಿಧ ವಸತಿ ಯೋಜನೆಗಳಡಿಯಲ್ಲಿ ಕಲಬುರಗಿ ಜಿಲ್ಲೆಗೆ 19743 ಹಾಗೂ ಯಾದಗಿರಿ ಜಿಲ್ಲೆಗೆ 11856 ಒಟ್ಟಾರೆಯಾಗಿ 31599 ಮನೆಗಳನ್ನು ಮಂಜೂರು ಮಾಡಿ ಕಾಮಗಾರಿ ಆದೇಶ ನೀಡಲಾಗಿರುತ್ತದೆ.<br><br>ಪ್ರಸಕ್ತ ವರ್ಷದಲ್ಲಿ ಪ್ರಧಾನ ಮಂತ್ರಿ ಆವಾಸ್ (ನಗರ) ಯೋಜನೆಯಡಿ 140 ಮನೆಗಳನ್ನು ಮಂಜೂರು ಮಾಡಲಾಗಿರುತ್ತದೆ.<br><br>ಯೋಜನವಾರು ಮಾಹಿತಿಯನ್ನು ಅನುಬಂಧದಲ್ಲಿ ಒದಗಿಸಲಾಗಿದೆ. |
| ಆ) | ಸದರಿ ಜಿಲ್ಲೆಗಳು ಹೈದ್ರಾಬಾದ್ ಕರ್ನಾಟಕ ವ್ಯಾಪ್ತಿಯಲ್ಲಿ ಬರುವುದರಿಂದ ವಿಶೇಷ ಪ್ರಕರಣವೆಂದು ಪರಿಗಣಿಸಿ ಗುಡಿಸಲು ಮುಕ್ತ ಜಿಲ್ಲೆಗಳೆಂದು ಘೋಷಿಸಲು ಸರ್ಕಾರ ಯಾವುದಾದರು ಯೋಜನೆಯನ್ನು ರೂಪಿಸುವ ಚಿಂತನೆಯಲ್ಲಿದೆಯೇ; (ವಿವರ ನೀಡುವುದು) | ರಾಜ್ಯವನ್ನು ಗುಡಿಸಲು ಮುಕ್ತ ಮಾಡುವ ಉದ್ದೇಶದಿಂದ ಸರ್ಕಾರವು ಪ್ರತಿ ವರ್ಷ ಮನೆಗಳನ್ನು ಪೂರ್ಣಗೊಳಿಸಲು ವಾರ್ಷಿಕ ಗುರಿಯನ್ನು ನಿಗದಿಪಡಿಸುತ್ತಿದೆ. ಪ್ರಸಕ್ತ ಆರ್ಥಿಕ ವರ್ಷದಲ್ಲಿ 3 ಲಕ್ಷ ಮನೆಗಳ ವಾರ್ಷಿಕ ಗುರಿಯನ್ನು ಹೊಂದಲಾಗಿದ್ದು, ಇದಕ್ಕೆ ಎದುರಾಗಿ ಹಿಂದಿನ ಸಾಲುಗಳಲ್ಲಿ ಪ್ರಗತಿಯಲ್ಲಿರುವ ಮನೆಗಳನ್ನು ಒಳಗೊಂಡಂತೆ ಒಟ್ಟು 1.12 ಲಕ್ಷ ಮನೆಗಳನ್ನು ಪೂರ್ಣಗೊಳಿಸಲಾಗಿದೆ. ಯಾವುದೇ ವಿಳಂಬವಾಗದಂತೆ ವಾರ್ಷಿಕ ಗುರಿಯನ್ನು ಸಾಧಿಸಲು ಸರ್ಕಾರದ ಮಟ್ಟದಲ್ಲಿ ಎಲ್ಲಾ ರೀತಿಯ ಕ್ರಮ ಕೈಗೊಳ್ಳಲಾಗುತ್ತಿದೆ. |
| ಇ) | ಈ ಜಿಲ್ಲೆಗಳಲ್ಲಿ ಬಡ ವರ್ಗದ ಜನರು ಹೆಚ್ಚಾಗಿ ವಾಸಿಸುತ್ತಿರುವುದರಿಂದ ಸರ್ಕಾರ ಪ್ರಸಕ್ತ ಸಾಲಿನಲ್ಲಿ ಹೆಚ್ಚುವರಿ ಮನೆಗಳನ್ನು ಮಂಜೂರು ಮಾಡಲು ಕ್ರಮ ಕೈಗೊಳ್ಳುವುದೆ ? (ವಿವರ ನೀಡುವುದು) | |

ಸಂಖ್ಯೆ :ವಇ 360 ಹೆಚ್ಎಂ 2023

(ಬಿ.ಜೆಡ್.ಜಮೀರ್ ಅಹ್ಮದ್ ಖಾನ್)
ವಸತಿ,ವಕ್ಫ್ ಮತ್ತು ಅಲ್ಪಸಂಖ್ಯಾತರ
ಕಲ್ಯಾಣ ಸಚಿವರು

## PMAY(U) Annexure

| Year | Component | District | City Name | IA | Approved | Completed | Foundation | Lintel | Roof | Under Progress | Not Started |
|---|---|---|---|---|---|---|---|---|---|---|---|
| 2023-24 | BLC | Yadgiri | Bhimarayanagudi TP | ULB - GOI | 77 | 0 | 1 | 0 | 0 | 1 | 76 |
| 2023-24 | BLC | Yadgiri | Shorapur TMC | ULB - GOI | 60 | 0 | 0 | 0 | 0 | 0 | 60 |
| 2023-24 | BLC | Yadgiri | Yadgir CMC | ULB - PKGB | 3 | 0 | 0 | 0 | 0 | 0 | 3 |
| **Total** | | | | | **140** | **0** | **1** | **0** | **0** | **1** | **139** |